ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ರಾಯಚೂರು ವಿಶ್ವವಿದ್ಯಾಲಯ ಪ್ರಾರಂಭಿಸುವ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :-

18 (131) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾಗಿರುವ ರಾಯಚೂರು ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯ ಸಿರವಾರ ತಾಲ್ಲೂಕಿನ ಕವಿತಾಳ ಪಟ್ಟಣದಲ್ಲಿರುವ ಸರ್ಕಾರಿ ವಸತಿ ಯುಕ್ತ ಪ್ರಥಮ ದರ್ಜೆ ಕಾಲೇಜಿಗೆ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯ ಸಿರವಾರ ಪಟ್ಟಣದಲ್ಲಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೋದಕ, ಬೋಧಕೇತರ ಹುದ್ದೆಗಳು ಎಷ್ಟು; ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಗೆ IIIT ಕಾಲೇಜು ಯಾವ ವರ್ಷದಲ್ಲಿ ಮಂಜೂರಾತಿ ಆಗಿದೆ; ಮಂಜೂರಾತಿ ಆಗಿದ್ದಲ್ಲಿ ಎಂದಿನಿಂದ ಕಾಲೇಜು ಪ್ರಾರಂಭಿಸಲಾಗಿದೆ; ಪ್ರಸ್ತುತ ಎಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ; ಸದರಿ ಕಾಲೇಜಿಗೆ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?